ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ತುಮಕೂರು ಜಿಲ್ಲೆಯಲ್ಲಿ ಅಂಗನವಾಡಿ ಕಟ್ಟಡಗಳ ಕುರಿತು

ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-

468(541) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶೈಕ್ಷಣಿಕವಾಗಿ ಹಿಂದುಳಿದಿರುವ ತುಮಕೂರು ಜಿಲ್ಲೆಯ ಸುಮಾರು 846 ಅಂಗನವಾಡಿಗಳಿಗೆ ಸ್ವಂತ ಕಟ್ಟಡವಿಲ್ಲದಿರುವುದು ಹಾಗೂ ಬಹುತೇಕ ಅಂಗನವಾಡಿಗಳು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ತುಮಕೂರು ಜಿಲ್ಲೆಯ ಸುಮಾರು 1.40 ಲಕ್ಷ ಗ್ರಾಮೀಣ ಪ್ರದೇಶದ ಮಕ್ಕಳು ಕಲಿಯುತ್ತಿರುವ ಅಂಗನವಾಡಿ ಕಟ್ಟಡಗಳಲ್ಲಿ ಶೌಚಾಲಯ, ಕುಡಿಯುವ ನೀರು ಮುಂತಾದ ಮೂಲಭೂತ ಸೌಕರ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಈ ಅಂಗನವಾಡಿಗಳ ಅಭಿವೃದ್ಧಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; ನಿವೇಶನ ರಹಿತ ಅಂಗನವಾಡಿಗಳಿಗೆ ಶೀಘ್ರ ನಿವೇಶನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ಮಾಹಿತಿ ನೀಡುವುದು)

(ಈ) ಪ್ರಸಕ್ತ ಸಾಲಿನಲ್ಲಿ ಮಹಿಳಾ ಕಲ್ಯಾಣ ಕಾರ್ಯಕ್ರಮಗಳು, ಮಕ್ಕಳ ಕಾರ್ಯಕ್ರಮಗಳು ಹಾಗೂ ಸಾಮಾಜಿಕ ರಕ್ಷಣಾ ಕಾರ್ಯಕ್ರಮಗಳಿಗೆ ಮೀಸಲಿಟ್ಟ ಹಣವೆಷ್ಟು; ಎಷ್ಟು ಹಣ ಬಳಕೆಯಾಗಿದೆ? (ಸಂಪೂರ್ಣ ವಿವರ ನೀಡುವುದು)